## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 707 |
| ಮಾನ್ಯ ಸದಸ್ಯರ ಹೆಸರು | ಶ್ರೀ ಭೀಮರಾವ್ ಬಸವರಾಜ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ಸಚಿವರು | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು |
| ಉತ್ತರಿಸಬೇಕಾದ ದಿನಾಂಕ | 21-08-2026 |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬೀದರ್ ಜಿಲ್ಲೆಯ ಹಲವು ಪ್ರಾಥಮಿಕ ಮತ್ತು ಸಮುದಾಯ ಆರೋಗ್ಯ (ಪಿ.ಎಚ್.ಸಿ ಮತ್ತು ಸಿ.ಎಚ್.ಸಿ) ಸೇರಿದಂತೆ ವೈದ್ಯರು ಮತ್ತು ಸಿಬ್ಬಂದಿಗಳ ಹುದ್ದೆಗಳು ಖಾಲಿ ಇರುವುದರಿಂದ ಜನರಿಗೆ ಸಮಸ್ಯೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮವೇನು; | ಬಂದಿದೆ |

ಬೀದರ್ ಜಿಲ್ಲೆಯ ಪ್ರಾಥಮಿಕ ಮತ್ತು ಸಮುದಾಯ ಆರೋಗ್ಯ ಕೇಂದ್ರಗಳಲ್ಲಿನ ವೈದ್ಯರು ಮತ್ತು ಸಿಬ್ಬಂದಿಗಳ ಸಂಸ್ಥೆವಾರು ಹಾಗೂ ಹುದ್ದೆವಾರು ಮಂಜೂರಾದ, ಕಾರ್ಯನಿರತ ಮತ್ತು ಖಾಲಿ ಹಾಗೂ ಸದರಿ ಹುದ್ದೆಗಳಿಗೆ ನಿಯೋಜಿಸಲಾದ ಹುದ್ದೆಗಳ ವಿವರ ಈ ಕೆಳಕಂಡಂತಿದೆ.

| ಮಂಜೂರಾದ ಹುದ್ದೆ | ಕಾರ್ಯನಿರತ | ಖಾಲಿ | ಹೊರಗುತ್ತಿಗೆ ಗುತ್ತಿಗೆ ಆಧಾರದ ಮೇಲೆ ನಿಯೋಜಿಸಲಾದ ಹುದ್ದೆಗಳು |
|---|---|---|---|
| 1149 | 834 | 315 | 68 |

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಖಾಲಿಯಾಗುವ ವೈದ್ಯಾಧಿಕಾರಿ/ಇತರೆ ಸಿಬ್ಬಂದಿಗಳ ಭರ್ತಿಗೆ ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.

1. ಇಲಾಖೆಯಲ್ಲಿ ಖಾಲಿಯಿರುವ 120 ತಜ್ಞ ವೈದ್ಯರು ಮತ್ತು 100 ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳ ಹುದ್ದೆಗಳನ್ನು ನೇರ ನೇಮಕಾತಿ ಮುಖಾಂತರ ಭರ್ತಿ ಮಾಡಿಕೊಳ್ಳಲು ಆರ್ಥಿಕ ಇಲಾಖೆಯು ಟಿಪ್ಪಣಿ ಸಂಖ್ಯೆ : ಆಇ 625 ವೆಚ್ಚ-5/2024, ದಿನಾಂಕ : 06/06/2024ರಲ್ಲಿ ಸಹಮತಿ ನೀಡಿದೆ. ಅದರಂತೆ ಹುದ್ದೆಗಳ ಭರ್ತಿಗಾಗಿ ವಿಶೇಷ ನೇಮಕಾತಿ ನಿಯಮಾವಳಿಯನ್ನು ರೂಪಿಸುವ ಕ್ರಮ ಜಾರಿಯಲ್ಲಿದೆ.
2. The Karnataka compulsory service by candidates completed Medical courses Act, 2012 ಹಾಗೂ ಕಾಲಕಾಲಕ್ಕೆ ಮಾಡಲಾದ ತಿದ್ದುಪಡಿ ಕಾಯ್ದೆ ಹಾಗೂ ಇದರಡಿ ರಚಿಸಲಾದ ನಿಯಮದಡಿ ವೈದ್ಯಕೀಯ ಕೋರ್ಸ್, ಸ್ನಾತಕೋತ್ತರ ವೈದ್ಯಕೀಯ ಕೋರ್ಸ್‌ನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದ ಅಭ್ಯರ್ಥಿಗಳಿಗೆ, ಹುದ್ದೆಗಳ ಲಭ್ಯತೆ ಆಧಾರದ ಮೇಲೆ ಒಂದು ವರ್ಷದ ಕಡ್ಡಾಯ ಸೇವೆಗೆ ನೇಮಿಸಲಾಗುತ್ತಿದೆ.
3. ಆದೇಶ ಸಂಖ್ಯೆ : ಆಕುಕ 619 ಹೆಚ್‌ಎಸ್‌ಹೆಚ್ 2022, ದಿನಾಂಕ : 17/01/2024 ಹಾಗೂ 11/03/2024ರಲ್ಲಿ ಇಲಾಖೆಯಲ್ಲಿ ಖಾಲಿ ಇರುವ 337 ತಜ್ಞ ವೈದ್ಯರು ಮತ್ತು 250 ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳ ಹುದ್ದೆಗಳನ್ನು ಕೆಲವೊಂದು ಷರತ್ತುಗಳಿಗೆ ಒಳಪಡಿಸಿ ಗುತ್ತಿಗೆ ಆಧಾರದ ಮೇಲೆ ನೇಮಿಸಿಕೊಳ್ಳಲು ಅವಕಾಶ ನೀಡಲಾಗಿದೆ.
4. ಸುತ್ತೋಲೆ ಸಂಖ್ಯೆ : ಆಕುಕ 21 ಹೆಚ್‌ಎಸ್‌ಹೆಚ್ 2025, ದಿನಾಂಕ : 08/01/2025 ಮತ್ತು ತಿದ್ದುಪಡಿ ಸಂಖ್ಯೆ : HFW/1/PRS/2025, ದಿನಾಂಕ : 25/01/2025 ಮತ್ತು ಪತ್ರ ದಿನಾಂಕ : 29/01/2025ರಲ್ಲಿ ಒಟ್ಟಾರೆಯಾಗಿ 250 ಮಿತಿಯಲ್ಲಿ ಅಗತ್ಯಕ್ಕನುಗುಣವಾಗಿ ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿ/ತುರ್ತು ಚಿಕಿತ್ಸಾ ವೈದ್ಯಾಧಿಕಾರಿ/ಹಿರಿಯ ವೈದ್ಯಾಧಿಕಾರಿ ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡಲು ಅನುಮತಿ ನೀಡಲಾಗಿದೆ.
5. ಕಲ್ಯಾಣ ಕರ್ನಾಟಕ ವೃಂದದಲ್ಲಿ ಹಾಗೂ ಮಿಕ್ಕುಳಿದ ವೃಂದದಲ್ಲಿನ ವಿವಿಧ ಅರೆ ವೈದ್ಯಕೀಯ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಅಧಿಸೂಚನೆ ಸಂಖ್ಯೆ : ಆಕುಕ 709 ಹೆಚ್‌ಎಸ್‌ಎಂ 2017, ದಿನಾಂಕ : 17/05/2022ರನ್ವಯ ವಿಶೇಷ ನೇಮಕಾತಿ ಸಮಿತಿಯ ಅಧಿಸೂಚನೆ

| | | |
|---|---|---|
| | | ಸಂಖ್ಯೆ : ಎಸ್.ಆರ್.ಬಿ/ಕೆ.ಕೆ/14/2022-23, ದಿನಾಂಕ : 24/08/2022ರಲ್ಲಿ ವಿವಿದ ವೃಂದದ ಒಟ್ಟು 320 ಹುದ್ದೆಗಳನ್ನು ಹಾಗೂ ಎಸ್.ಆರ್.ಬಿ/ಆರ್.ಪಿ.ಬಿ/15/2022-23, ದಿನಾಂಕ : 02/09/2022ರಲ್ಲಿ ವಿವಿಧ ವೃಂದದ ಒಟ್ಟು 558 ಹುದ್ದೆಗಳನ್ನು ಭರ್ತಿ ಮಾಡಲು ಆನ್ ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಿ, ಅಂತಿಮ ಆಯ್ಕೆ ಪಟ್ಟಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳ ಪೈಕಿ ಎಲ್ಲಾ ಸ್ವೀಕಾರ ವರದಿಗಳು ಸ್ವೀಕೃತವಾಗಿರುವ ಅಭ್ಯರ್ಥಿಗಳಿಗೆ ಹಂತ ಹಂತವಾಗಿ ನೇಮಕಾತಿ ಆದೇಶಗಳನ್ನು ನೀಡಲಾಗಿರುತ್ತದೆ.<br>6. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಖಾಲಿ ಇರುವ 1250 ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿ ಹಾಗೂ 300 ಆರೋಗ್ಯ ನಿರೀಕ್ಷಣಾಧಿಕಾರಿ ಹುದ್ದೆಗಳ ಭರ್ತಿ ಮಾಡಲು ಕರಡು ವಿಶೇಷ ನೇಮಕಾತಿ ನಿಯಮಗಳನ್ನು ಪ್ರಕಟಿಸುವ ಹಂತದಲ್ಲಿರುತ್ತದೆ.<br>7. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ನಿಧನ, ನಿವೃತ್ತಿ, ರಾಜೀನಾಮೆ, ಸ್ವ-ಇಚ್ಛಾ ನಿವೃತ್ತಿ ಮತ್ತು ಇತರ ಕಾರಣಗಳಿಂದ ಖಾಲಿಯಾಗುವ ವೈದ್ಯಾಧಿಕಾರಿ ಹುದ್ದೆಗಳನ್ನು ಕಾಲಕಾಲಕ್ಕೆ ನೇರ ನೇಮಕಾತಿ, ಗುತ್ತಿಗೆ/ಹೊರಗುತ್ತಿಗೆ ಆಧಾರದ ನೇಮಕಾತಿ, ಕಡ್ಡಾಯ ಸೇವೆ, ಪದೋನ್ನತಿ, ವರ್ಗಾವಣೆ ಮೂಲಕ ಭರ್ತಿ ಮಾಡುವ ಹುದ್ದೆಗಳ ಮೂಲಕ ಕೊರತೆಯಾಗದಂತೆ ನೇಮಿಸಿಕೊಳ್ಳಲು ಅವಕಾಶ ನೀಡಲಾಗಿದೆ. |
| ಆ) | ಬೀದರ್ ಜಿಲ್ಲೆಯ ವ್ಯಾಪ್ತಿಯಲ್ಲಿ ಅಂಬುಲೆನ್ಸ್ ಸೌಲಭ್ಯ ಒದಗಿಸಲು ಸರ್ಕಾರ ಯಾವ ಯಾವ ಕ್ರಮ ಕೈಗೊಂಡಿದೆ? (ಮಾಹಿತಿ ನೀಡುವುದು) | ಭಾರತ ಸರ್ಕಾರದ ಮಾರ್ಗಸೂಚಿಗಳನ್ವಯ ಪ್ರತಿ 1 ಲಕ್ಷ ಜನಸಂಖ್ಯೆಗೆ 1 ಮೂಲಭೂತ ಜೀವ ರಕ್ಷಕ (BLS) ಅಂಬ್ಯುಲೆನ್ಸ್ ಹಾಗೂ ಪ್ರತಿ 5 ಲಕ್ಷ ಜನಸಂಖ್ಯೆಗೆ 1 ಸುಧಾರಿತ ಜೀವ ರಕ್ಷಕ (ALS) ಅಂಬ್ಯುಲೆನ್ಸ್ ಕಾರ್ಯಗತಗೊಳಿಸಬೇಕಾಗಿರುತ್ತದೆ. ಅದರೆ ಬೀದರ್ ಜಿಲ್ಲೆಯ ಜನಸಂಖ್ಯೆಗನುಗುಣವಾಗಿ 4 ALS ಮತ್ತು 18 BLS ಅಂಬ್ಯುಲೆನ್ಸ್‌ಗಳನ್ನು ಕಾರ್ಯಗತಗೊಳಿಸಬೇಕಾಗಿದ್ದು, ಸದರಿ ಮಾನದಂಡಕ್ಕಿಂತಲೂ ಹೆಚ್ಚಿನ ಪ್ರಮಾಣದಲ್ಲಿ ಈ ಕೆಳಕಂಡಂತೆ ಅಂಬ್ಯುಲೆನ್ಸ್ ಸೇವೆಗಳನ್ನು ಒದಗಿಸಲಾಗುತ್ತಿದೆ. |

| ಕ್ರ.ಸಂ | ಕಾರ್ಯಕ್ರಮ | ಒಟ್ಟು ಲಭ್ಯ | ಆಫ್‌ರೋಡ್ | ಕಾರ್ಯನಿರ್ವಹಿಸುತ್ತಿರುವ |
|---|---|---|---|---|
| 1 | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧೀನದ ಅಂಬ್ಯುಲೆನ್ಸ್‌ಗಳು | 69 | 21 | 48 (ALS-04, BLS-38, ಮಿನಿ-06) |
| 2 | 108 ಆರೋಗ್ಯ ಕವಚ ಯೋಜನೆ | 19 | 03 | 16 (ALS-05, BLS-11) |
| | ಒಟ್ಟು | 88 | 24 | 64 |

ಆಫ್‌ರೋಡ್ ಆಗಿರುವ ವಾಹನಗಳ ಬದಲಿಗೆ ಹೊಸ ವಾಹನಗಳನ್ನು ಒದಗಿಸುವ ಕುರಿತು ಕ್ರಮ ಕೈಗೊಳ್ಳಲಾಗುತ್ತಿದೆ.

ಆಕುಕ 64 ಹೆಚ್‌ಎಸ್‌ಹೆಚ್ 2026

(ಯು ಟಿ ಖಾದರ್ ಫರೀದ್)

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು